**ಕರ್ನಾಟಕ ಸರ್ಕಾರ**

ಸಂಖ್ಯೆ: **ಡಿಪಿಎ 12 ಎಆರ್‌ಬಿ 2014**

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು,
ದಿನಾಂಕ:21.10.2014

ಅಧಿಸೂಚನೆ

ಭಾರತ ಸಂವಿಧಾನದ 166 ನೇ ಅನುಚ್ಛೇದದ ಕಲಮು (2) ಮತ್ತು (3) ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ರಾಜ್ಯಪಾಲರು, ಕರ್ನಾಟಕ ಸರ್ಕಾರ (ವ್ಯವಹಾರ ಹಂಚಿಕೆ) ನಿಯಮಗಳು, 1977, ಇದಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಕೆಳಕಂಡ ನಿಯಮಗಳನ್ನು ಈ ಮೂಲಕ ರಚಿಸಿದ್ದಾರೆ. ಎಂದರೆ,-

1. **ಶೀರ್ಷಿಕೆ ಮತ್ತು ಪ್ರಾರಂಭ** :- 1) ಈ ನಿಯಮಗಳನ್ನು ಕರ್ನಾಟಕ ಸರ್ಕಾರ (ವ್ಯವಹಾರ ಹಂಚಿಕೆ) (ತಿದ್ದುಪಡಿ) ನಿಯಮಗಳು, 2014 ಎಂದು ಕರೆಯತಕ್ಕದ್ದು.

   2) ಇವುಗಳು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ಅನುಸೂಚಿ XI ಕ್ಕೆ ತಿದ್ದುಪಡಿ** :- ಕರ್ನಾಟಕ ಸರ್ಕಾರ (ವ್ಯವಹಾರ ಹಂಚಿಕೆ) ನಿಯಮಗಳು, 1977 ರ ಅನುಸೂಚಿ XI ರಲ್ಲಿ (ಇನ್ನು ಮುಂದೆ ಸದರಿ ನಿಯಮಗಳೆಂದು ಕರೆಯಲಾಗುವ),-

   (ಎ) **"ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ"** ಎಂಬ ಶೀರ್ಷಿಕೆಗೆ **"ಸಂಸದೀಯ ವ್ಯವಹಾರಗಳ ಇಲಾಖೆ"** ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

   (ಬಿ) **"ಡಿ. ನೌಕರಿ ಭರ್ತಿ ನಿಯಮಗಳು ಮತ್ತು ನೇಮಕಗಳು"** ಉಪಶೀರ್ಷಿಕೆಯಡಿಯಲ್ಲಿ **"ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ"** ಎಂಬ ಪದಗಳು ಬರುವಲ್ಲೆಲ್ಲ **"ಸಂಸದೀಯ ವ್ಯವಹಾರಗಳ ಇಲಾಖೆ"** ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

3. **ಅನುಸೂಚಿ XI-A ಕ್ಕೆ ತಿದ್ದುಪಡಿ**:- ಸದರಿ ನಿಯಮಗಳ ಅನುಸೂಚಿ XI-A ರಲ್ಲಿ **"ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ"** ಎಂಬ ಶೀರ್ಷಿಕೆಗೆ **"ಕಾನೂನು ಇಲಾಖೆ"** ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ.ಮಂಗಳ ಪ್ರಸಾದ್) 21/10/14
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 21.10.2014 ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 200 ಪ್ರತಿಗಳನ್ನು ಒದಗಿಸುವ ಬಗ್ಗೆ.